156 = ನಿ:72 = (79) (9)
ದಿ:13/08/2025

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ ಇವರು ನಿಯಮ 72ರಡಿಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ**

**ರಾಜ್ಯದಲ್ಲಿ ಬುಡಕಟ್ಟು ಮತ್ತು ವನವಾಸಿ ಜನಾಂಗಗಳು ವಾಸಿಸುವ ಅನೇಕ ಹಳ್ಳಿಗಳಲ್ಲಿ ಅವರ ಧಾರ್ಮಿಕ ಪರಂಪರೆ ಆಚರಿಸಲು ಚಿಕ್ಕ ಚಿಕ್ಕ ಗುಡಿ ಇರುವ ಪೂಜಾಸ್ಥಳಗಳನ್ನು ಹೊಂದಿರುತ್ತಾರೆ. ಆದರೆ ಬುಡಕಟ್ಟು ಮತ್ತು ವನವಾಸಿ ಜನಾಂಗಗಳ ಸಣ್ಣ ಸಣ್ಣ ಪೂಜಾ ಪೂಜಾಸ್ಥಳಗಳ ಅಭಿವೃದ್ಧಿಗಾಗಿ ಸರ್ಕಾರದಿಂದ ಅನುದಾನ ತಲುಪುತ್ತಿಲ್ಲ. ಹೀಗಾಗಿ ಬುಡಕಟ್ಟು ಜನರ ಪೂಜಾಸ್ಥಳಗಳಿಗೂ ಕೂಡ ದೇವಸ್ಥಾನಗಳ ನಿರ್ಮಾಣಕ್ಕಾಗಿ ಅನುದಾನ ಮಂಜೂರು ಮಾಡುವ ಕುರಿತು ನಿಯಮ 72ರ ಅಡಿಯಲ್ಲಿ ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಗಮನ ಸೆಳೆದಿರುತ್ತಾರೆ.**

**ಉತ್ತರ:**

ಧಾರ್ಮಿಕ ದತ್ತಿ ಇಲಾಖೆಯ ವ್ಯಾಪ್ತಿಯಲ್ಲಿ 2011-12ನೇ ಸಾಲಿನಿಂದ ಗಿರಿಜನ ಉಪಯೋಜನೆ ಜಾರಿಗೊಳಿಸಿದ್ದು, ಸದರಿ ಕಾರ್ಯಕ್ರಮದಡಿ ಗಿರಿಜನ/ಪರಿಶಿಷ್ಟ ಪಂಗಡದವರು ವಾಸಿಸುವ ಸ್ಥಳಗಳಲ್ಲಿನ ದೇವಾಲಯ, ಪ್ರಾರ್ಥನಾ ಮಂದಿರಗಳ ನವ ನಿರ್ಮಾಣ/ಜೀರ್ಣೋದ್ಧಾರಕ್ಕಾಗಿ ವಿಧಾನ ಸಭಾ ಕ್ಷೇತ್ರವಾರು ಅನುದಾನವನ್ನು ಸರ್ಕಾರದ ಆದೇಶ ಸಂಖ್ಯೆ:ಕಂಇ 189 ಮುಅಬಿ 2011, ದಿನಾಂಕ:19.09.2011ರಲ್ಲಿನ ಮಾರ್ಗಸೂಚಿಗಳನ್ವಯ ಬಿಡುಗಡೆ ಮಾಡಲಾಗುತ್ತಿದೆ.

ಧಾರ್ಮಿಕ ದತ್ತಿ ಇಲಾಖೆಯಿಂದ ಬುಡಕಟ್ಟು ಮತ್ತು ವನವಾಸಿ ಜನಾಂಗಗಳ ಪರಂಪರೆ, ಸಂಸ್ಕೃತಿ, ಆಚಾರ, ವಿಚಾರ ಮತ್ತು ಧಾರ್ಮಿಕತೆ ಉಳಿಸಲು ದಿನಾಂಕ:19.09.2011ರ ಸರ್ಕಾರದ ಆದೇಶದನ್ವಯ ಗಿರಿಜನ ಉಪಯೋಜನೆಯಡಿ ಒದಗಿಸಲಾಗುವ ಅನುದಾನವನ್ನು ಗಿರಿಜನ / ಪರಿಶಿಷ್ಟ ಪಂಗಡದವರು ವಾಸಿಸುವ ಸ್ಥಳಗಳಲ್ಲಿ ಅಥವಾ ಸದರಿ ಸಮುದಾಯದವರು ವಾಸಿಸುವ ಸ್ಥಳಕ್ಕೆ ಸಮೀಪದಲ್ಲಿ ದೇವಾಲಯ, ಪ್ರಾರ್ಥನಾ ಮಂದಿರ ಅಥವಾ ಕಲ್ಯಾಣ ಮಂಟಪ/ಸಮುದಾಯ ಭವನವನ್ನು ನಿರ್ಮಿಸಲು ಅಥವಾ ಅವುಗಳ ಜೀರ್ಣೋದ್ಧಾರಕ್ಕಾಗಿ ಬಳಸಲು ಬಿಡುಗಡೆ ಮಾಡಲು ಅವಕಾಶ ಕಲ್ಪಿಸಲಾಗಿದೆ.

ಗಿರಿಜನ/ಪರಿಶಿಷ್ಟ ಪಂಗಡದವರು ವಾಸಿಸುವ ಸ್ಥಳಗಳಲ್ಲಿ ದೇವಾಲಯಗಳು ಅರಣ್ಯ ವ್ಯಾಪ್ತಿಯಲ್ಲಿದ್ದಲ್ಲಿ ಅರಣ್ಯ ಇಲಾಖೆಯ ಅನುಮತಿ ಪಡೆಯಬೇಕಾಗಿರುತ್ತದೆ.

ಗಿರಿಜನ ಉಪ ಯೋಜನೆಯಡಿ ಕಳೆದ 02 ವರ್ಷಗಳಲ್ಲಿ ಈ ಯೋಜನೆಯಡಿ ಬಿಡುಗಡೆ ಮಾಡಲಾದ ಅನುದಾನದ ವಿವರ ಕೆಳಕಂಡಂತಿದೆ.

**(ರೂ.ಲಕ್ಷಗಳಲ್ಲಿ)**

| **ಕ್ರಸ** | **ಯೋಜನೆ** | **2023-24** | **2024-25** |
|---|---|---|---|
| 1. | ಗಿರಿಜನ ಉಪ ಯೋಜನೆ | 119.97 | 119.97 |
| 2. | ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಕಾಯ್ದೆ 2013ರಡಿ ಬಳಕೆಯಾಗದೇ ಇರುವ ಮೊತ್ತ ಇದರಡಿ ಗಿರಿಜನ ಉಪ ಯೋಜನೆಗೆ | 712.64 | 116.99 |
| | **ಒಟ್ಟು** | **832.61** | **236.96** |

ಸದರಿ ಯೋಜನೆಯಡಿ ವಿಧಾನ ಸಭಾ ಕ್ಷೇತ್ರವಾರು ಅನುದಾನ ಬಿಡುಗಡೆ ಮಾಡಲಾಗಿದ್ದು, ಕಳೆದ 02 ವರ್ಷಗಳಲ್ಲಿ ಪ್ರತಿ ವಿಧಾನ ಸಭಾ ಕ್ಷೇತ್ರಕ್ಕೆ ಬಿಡುಗಡೆ ಮಾಡಲಾದ ಅನುದಾನದ ವಿವರ ಕೆಳಕಂಡಂತಿದೆ.

(ರೂ.ಲಕ್ಷಗಳಲ್ಲಿ)

| ಕ್ರಸ | ಯೋಜನೆ | 2023-24 | 2024-25 |
|---|---|---|---|
| 1. | ಗಿರಿಜನ ಉಪ ಯೋಜನೆ | 0.53 | 0.53 |
| 2. | ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆ ಕಾಯ್ದೆ 2013ರಡಿ ಬಳಕೆಯಾಗದೇ ಇರುವ ಮೊತ್ತ ಇದರಡಿ ಗಿರಿಜನ ಉಪ ಯೋಜನೆಗೆ ಲೆಕ್ಕ ಶೀರ್ಷಿಕೆ "2053-00-800-0-12 (423) | 3.18 | 0.52 |
| | **ಒಟ್ಟು** | **3.71** | **1.05** |

ಮೇಲ್ಕಂಡಂತೆ ವಿಧಾನಸಭಾ ಕ್ಷೇತ್ರವಾರು ಅನುದಾನವನ್ನು ಹಂಚಿಕೆ ಮಾಡಿ, ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗುತ್ತಿದ್ದು, ಈ ಅನುದಾನದಡಿ ಸದರಿ ಯೋಜನೆಯ ಮಾರ್ಗಸೂಚಿಯನ್ವಯ ಜಿಲ್ಲಾ ಹಂತದಲ್ಲಿರುವ ಜಿಲ್ಲಾ ಸಮಿತಿಗಳಲ್ಲಿ ಕಾಮಗಾರಿಗಳನ್ನು ಆಯ್ಕೆ ಮಾಡಿ ನಿರ್ವಹಿಸಬೇಕಾಗಿದ್ದು, ಅದರನ್ವಯ ವಿಧಾನಸಭಾ ಕ್ಷೇತ್ರವಾರು ಪರಿಶಿಷ್ಟ ಪಂಗಡದವರ ದೇವಾಲಯಗಳ ಅಭಿವೃದ್ಧಿ/ಜೀರ್ಣೋದ್ಧಾರ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿರುತ್ತದೆ.

ಸಂಖ್ಯೆ: ಕಂಇ 168 ಮುಸಪ್ರ 2025

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು